## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದಲ್ಲಿ 24*7 ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಭಾವನೆ ಪಾವತಿಸಲು ಅನುದಾನ ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

1. ಜಿಲ್ಲಾಧಿಕಾರಿ, ಉತ್ತರ ಕನ್ನಡ ಜಿಲ್ಲೆ ರವರ ಅ.ಸ. ಪತ್ರ ಸಂಖ್ಯೆ: ಸಿಎಎಲ್/ವಿವ-54/2021-22 E-34301, ದಿನಾಂಕ: 31.05.2024.
2. ಸರ್ಕಾರದ ಆದೇಶ ಸಂಖ್ಯೆ: ಕಂಇ 237 ಟಿಎನ್‌ಆರ್ 2020, ದಿನಾಂಕ: 20.08.2020.
3. ಸರ್ಕಾರದ ಆದೇಶ ಸಂಖ್ಯೆ: ಕಂಇ 227 ಟಿಎನ್‌ಆರ್ 2022, ದಿನಾಂಕ: 12.08.2022.
4. ಜಿಲ್ಲಾಧಿಕಾರಿ, ಕೊಡಗು ಜಿಲ್ಲೆ ರವರ ಪತ್ರ ಸಂಖ್ಯೆ: ಪ್ರುವಿ:28:2022-23, ದಿನಾಂಕ: 13.06.2024.

* * * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಅ.ಸ. ಪತ್ರದಲ್ಲಿ ಜಿಲ್ಲಾಧಿಕಾರಿ,ಉತ್ತರ ಕನ್ನಡ ಜಿಲ್ಲೆ ಪ್ರಕೃತಿ ವಿಕೋಪದಿಂದ ಉಂಟಾಗುವ ಹಾನಿಯ ಕುರಿತು ಮಾಹಿತಿ ಸಂಗ್ರಹಣೆ ಹಾಗೂ ವಿಪತ್ತು ನಿರ್ವಹಣಾ ಕೇಂದ್ರದಲ್ಲಿ ಇತರೆ ತುರ್ತು ಕಾರ್ಯಗಳನ್ನು ನಿರ್ವಹಿಸಲು ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದಲ್ಲಿ ಆಗಸ್ಟ 2016 ರಿಂದ ಹೊರಗುತ್ತಿಗೆ ಆಧಾರದಲ್ಲಿ 03 ಜನ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ನೇಮಕಮಾಡಿಕೊಂಡಿದ್ದು, ಓದಲಾದ ಕ್ರಮ ಸಂಖ್ಯೆ (2) ಮತ್ತು (3) ರಲ್ಲಿನ ಸರ್ಕಾರದ ಆದೇಶದಂತೆ ವಿಪತ್ತು ನಿರ್ವಹಣಾ ಪರಿಣಿತರ ಮಾಸಿಕ ಸಂಭಾವನೆ ಹಾಗೂ ಆಡಳಿತಾತ್ಮಕ ವೆಚ್ಚ ಭರಿಸಲು ಬಿಡುಗಡೆಯಾಗಿದ್ದ ಅನುದಾನದಿಂದ ಸದರಿ 03 ಜನ ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ಮಾರ್ಚ್ 2023 ರ ವರೆಗೆ ಸಂಭಾವನೆ ಪಾವತಿಸಲಾಗಿದ್ದು, ತದನಂತರ ಅನುದಾನ ಬಿಡುಗಡೆಯಾಗದೇ ಇರುವ ಕಾರಣ ಏಪ್ರಿಲ್ 2023 ರಿಂದ ಸದರಿ 03 ಜನ ಡಾಟಾ ಎಂಟ್ರಿ ಆಪರೇಟರ್‌ಗಳ ಸಂಭಾವನೆ ಪಾವತಿಸಿರುವುದಿಲ್ಲವೆಂದು ತಿಳಿಸುತ್ತಾ, ಸದರಿ ಸಿಬ್ಬಂದಿಗಳ ಬಾಕಿ ಸಂಭಾವನೆ ಪಾವತಿಸಲು ಅನುದಾನ ಬಿಡುಗಡೆಗೊಳಿಸುವಂತೆ ಉತ್ತರ ಕನ್ನಡ ಜಿಲ್ಲೆಯ ಜಿಲ್ಲಾಧಿಕಾರಿಯವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿನ ಪತ್ರದಲ್ಲಿ ಕೊಡಗು ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳಲ್ಲಿ ಪ್ರಾಕೃತಿಕ ವಿಕೋಪದಿಂದ ಮಾನವ ಹಾಗೂ ಪ್ರಾಣಿ ಜೀವಹಾನಿ ಮತ್ತು ಮೂಲಭೂತ ಸೌಕರ್ಯಗಳ ಹಾನಿಯಾಗಿದ್ದು ಈ ಸಂಬಂಧ ಪರಿಣಾಮಕಾರಿಯಾಗಿ ವಿಪತ್ತುಗಳನ್ನು ನಿರ್ವಹಿಸಲು ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರವನ್ನು ತೆರೆದಿದ್ದು 03 ಜನ ಸಿಬ್ಬಂದಿಗಳನ್ನು ಬಾಹ್ಯ ಮೂಲದಿಂದ ನೇಮಕ ಮಾಡಿಕೊಂಡಿರುವುದಾಗಿ ತಿಳಿಸುತ್ತಾ, ಓದಲಾದ ಕ್ರಮ ಸಂಖ್ಯೆ (2) ಮತ್ತು (3) ರಲ್ಲಿನ ಸರ್ಕಾರದ ಆದೇಶದಂತೆ ವಿಪತ್ತು ನಿರ್ವಹಣಾ ಪರಿಣಿತರ ಮಾಸಿಕ ಸಂಭಾವನೆ ಹಾಗೂ ಆಡಳಿತಾತ್ಮಕ ವೆಚ್ಚ ಭರಿಸಲು ಬಿಡುಗಡೆಯಾಗಿದ್ದ ಅನುದಾನದಿಂದ ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ 03 ಜನ ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದಲ್ಲಿ ನೇಮಕ ಮಾಡಿಕೊಂಡಿದ್ದು ಸದರಿ ಸಿಬ್ಬಂದಿಗಳಿಗೆ ಹೊರಗುತ್ತಿಗೆ ಸಂಸ್ಥೆಯವರು ಕನಿಷ್ಠ ಕಾರ್ಮಿಕ ವೇತನ ಕಾಯ್ದೆಯಂತೆ ಪ್ರತಿ ಮಾಹೆಗೆ ಮೂವರು ಸಿಬ್ಬಂದಿಗೆ ಒಟ್ಟು ರೂ. 73,225/- ರಂತೆ ಬಿಲ್ ಸಲ್ಲಿಸುತ್ತಿದ್ದು, ಅದರಂತೆ ವೇತನ ಬಿಡುಗಡೆಗೊಳಿಸುತ್ತಿರುವುದಾಗಿ ತಿಳಿಸುತ್ತಾ, ಸದರಿ ಸಿಬ್ಬಂದಿಗಳಿಗೆ ಮಾಸಿಕ ಸಂಭಾವನೆ ಬಿಡುಗಡೆಗೊಳಿಸಲು ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ ರೂ. 2.93 ಲಕ್ಷಗಳು ಮಾತ್ರ ಬಾಕಿ ಇದ್ದು ಅನುದಾನ ಬಿಡುಗಡೆ ಮಾಡುವಂತೆ ಕೊಡಗು ಜಿಲ್ಲೆಯ ಜಿಲ್ಲಾಧಿಕಾರಿಯವರು ಕೋರಿರುತ್ತಾರೆ.

ಮೇಲಿನಂತೆ ಜಿಲ್ಲಾಧಿಕಾರಿ ಉತ್ತರ ಕನ್ನಡ ಜಿಲ್ಲೆ ಹಾಗೂ ಜಿಲ್ಲಾಧಿಕಾರಿ ಕೊಡಗು ಜಿಲ್ಲೆ ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಸದರಿ ಎರಡು ಜಿಲ್ಲೆಗಳು ಪ್ರಕೃತಿ ವಿಕೋಪಗಳಿಂದ ಹೆಚ್ಚು ತುತ್ತಾಗುವ ಕಾರಣ ಉತ್ತರ ಕನ್ನಡ ಜಿಲ್ಲೆಯ ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ 03 ಜನ ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ದಿನಾಂಕ: 31.03.2025 ರ ವರೆಗೆ ಕನಿಷ್ಠ ವೇತನದಂತೆ ಮಾಸಿಕ ಸಂಭಾವನೆ ಪಾವತಿಸಲು ರೂ. 19,00,000/- (ಹತ್ತೊಂಬತ್ತು ಲಕ್ಷ) ಗಳನ್ನು ಹಾಗೂ ಕೊಡಗು ಜಿಲ್ಲೆಯ ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ 03 ಜನ ಸಿಬ್ಬಂದಿಗಳಿಗೆ ದಿನಾಂಕ: 31.03.2025 ರ ವರೆಗೆ ಕನಿಷ್ಠ ವೇತನದಂತೆ ಮಾಸಿಕ ಸಂಭಾವನೆ ಪಾವತಿಸಲು ರೂ. 5,00,000/- (ಐದು ಲಕ್ಷ) ಗಳನ್ನು 2024-25 ನೇ ಸಾಲಿನ ರಾಜ್ಯ ವಿಪತ್ತು ಪರಿಹಾರ ನಿಧಿ – ಕೆಪಾಸಿಟಿ ಬಿಲ್ಡಿಂಗ್ (Capacity Building) ಲೆಕ್ಕ ಶೀರ್ಷಿಕೆ 2245~80~102~0~01~051 ರಡಿ ಅನುದಾನ ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಕಂಇ 266 ಟಿಎನ್‌ಆರ್ 2023;</u>**
**<u>ಬೆಂಗಳೂರು, ದಿನಾಂಕ: 30.09.2024.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ,ಉತ್ತರ ಕನ್ನಡ ಜಿಲ್ಲೆ ಮತ್ತು ಕೊಡಗು ಜಿಲ್ಲೆಗಳಲ್ಲಿ ಸತತ ವಿಪತ್ತುಗಳು ಸಂಭವಿಸಿರುವ ಹಿನ್ನಲೆಯಲ್ಲಿ 24*7 ಜಿಲ್ಲೆಯ ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರ (District Emergency Operations Centre) ಕಾರ್ಯ ನಿರವಹಿಸಬೇಕಾಗಿರುವುದರಿಂದ ಉತ್ತರ ಕನ್ನಡ ಜಿಲ್ಲೆಯ ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದಲ್ಲಿ ಹೊರ ಗುತ್ತಿಗೆ ಆಧಾರದಲ್ಲಿ 24*7 ಕಾರ್ಯ ನಿರ್ವಹಿಸಲು 03 ಜನ ಸಿಬ್ಬಂದಿಗಳಿಗೆ ದಿನಾಂಕ: 31.03.2025 ರ ವರೆಗೆ ಕನಿಷ್ಠ ವೇತನದಂತೆ ಮಾಸಿಕ ಸಂಭಾವನೆ ಪಾವತಿಸಲು ರೂ. 19,00,000/- (ಹತ್ತೊಂಬತ್ತು ಲಕ್ಷ) ಗಳನ್ನು ಹಾಗೂ ಕೊಡಗು ಜಿಲ್ಲೆಯ ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದಲ್ಲಿ ಹೊರ ಗುತ್ತಿಗೆ ಆಧಾರದಲ್ಲಿ 24*7 ಕಾರ್ಯ ನಿರ್ವಹಿಸಲು 03 ಜನ ಸಿಬ್ಬಂದಿಗಳಿಗೆ ದಿನಾಂಕ: 31.03.2025 ರ ವರೆಗೆ ಕನಿಷ್ಠ ವೇತನದಂತೆ ಮಾಸಿಕ ಸಂಭಾವನೆ ಪಾವತಿಸಲು ರೂ. 5,00,000/- (ಐದು ಲಕ್ಷ) ಗಳನ್ನು 2024-25ನೇ ಸಾಲಿನ ರಾಜ್ಯ ವಿಪತ್ತು ಪರಿಹಾರ ನಿಧಿ ಲೆಕ್ಕ ಶೀರ್ಷಿಕೆ 2245~80~102~0~01~051 (Capacity Building) ರಡಿ ಅನುದಾನವನ್ನು ಕೆಳಕಂಡ ಷರತ್ತುಗಳ ಪಾಲನೆಗೆ ಒಳಪಟ್ಟು ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲು ಸರ್ಕಾರವು ಮಂಜೂರಾತಿ ನೀಡಿದೆ.

**<u>ಅನುದಾನದ ಬಳಕೆಯಲ್ಲಿ ಜಿಲ್ಲಾಧಿಕಾರಿಗಳು ಪಾಲಿಸಬೇಕಾದ ಷರತ್ತುಗಳು:</u>**

1. ಸದರಿ ಸಿಬ್ಬಂದಿಗಳನ್ನು ನಿಯಮಾನುಸಾರ 24*7 ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದಲ್ಲಿ ಕಾರ್ಯ ನಿರ್ವಹಿಸಲು ಅನುವಾಗಲು ಮಾತ್ರ ಉಪಯೋಗಿಸುವುದು. ಯಾವುದೇ ಕಾರಣಕ್ಕು ಜಿಲ್ಲಾಧಿಕಾರಿಯವರ ಕಛೇರಿಯ ಇತರ ಕೆಲಸಗಳಿಗೆ ಸದರಿ ಸಿಬ್ಬಂದಿಯನ್ನು ಬಳಸಬಾರದು.
2. ಬಿಡುಗಡೆ ಮಾಡಿರುವ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಸುವುದು, ಅನುದಾನ ವೆಚ್ಚ ಮಾಡಿದಕ್ಕೆ ಸಂಬಂಧಿಸಿದಂತೆ ಹಣ ಬಳಕೆ ಪ್ರಮಾಣ ಪತ್ರವನ್ನು ಜಿಲ್ಲಾಧಿಕಾರಿಗಳ ಮೇಲುರುಜುವಿನೊಂದಿಗೆ ಸರ್ಕಾರಕ್ಕೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
3. ರಾಜ್ಯ ಸರ್ಕಾರದಿಂದ ಹಾಗೂ ಕೇಂದ್ರ ಸರ್ಕಾರದಿಂದ ಕಾಲ ಕಾಲಕ್ಕೆ ಹೊರಡಿಸಿರುವ ಆದೇಶ, ಸುತ್ತೋಲೆಗಳನ್ನು ಪಾಲಿಸತಕ್ಕದ್ದು.
4. ಸರ್ಕಾರದಿಂದ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ನೀಡುವಂತಹ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ ವಿಪತ್ತು ನಿರ್ವಹಣೆಯ ಎಲ್ಲಾ ಕಾರ್ಯಗಳಲ್ಲೂ ಸಹಕರಿಸುವುದು.

ಮೇಲಿನಂತೆ ಬಿಡುಗಡೆ ಮಾಡಿರುವ ಅನುದಾನವನ್ನು ಸರ್ಕಾರದ ಅಧೀನ ಕಾರ್ಯದರ್ಶಿಗಳು ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3) ಇವರು ಲೆಕ್ಕಶೀರ್ಷಿಕೆ:"2245~80~102~0~01~051" ಅಡಿಯಲ್ಲಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಡ್ರಾಯಿಂಗ್ (DDO) ಕೋಡ್‌ಗೆ ಅನುದಾನವನ್ನು ಅಪ್‌ಲೋಡ್ ಮಾಡುವುದು.

.....3

ಮೇಲಿನಂತೆ ಬಿಡುಗಡೆ ಮಾಡಿದ ಅನುದಾನವನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಪೇಯಿಸ್ ರಶೀದಿ ಮೂಲಕ ತಮ್ಮ ಪಿ.ಡಿ. ಖಾತೆಗೆ ಜಮೆ ಮಾಡಿಕೊಳ್ಳತಕ್ಕದ್ದು.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 711 ವೆಚ್ಚ-7/2024, ದಿನಾಂಕ: 20.09.2024 ರಲ್ಲಿ ನೀಡಿರುವ ಸಹಮತಿಯ ಅನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್. ಆರ್. ಶಿವಶಂಕರ್)**
ಸರ್ಕಾರದ ಉಪ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಮತ್ತು ನೋಂ & ಮು).

**ಗೆ:**

1. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಪಿ.ಬಿ.ನಂ. 5329/5369 ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಪಿ.ಬಿ.ನಂ.5398, ನ್ಯೂ ಬಿಲ್ಡಿಂಗ್ 'ಆಡಿಟ್ ಭವನ' ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಪಿ.ಬಿ.ನಂ.5398, ನ್ಯೂ ಬಿಲ್ಡಿಂಗ್ 'ಆಡಿಟ್ ಭವನ' ಬೆಂಗಳೂರು.
4. ಜಿಲ್ಲಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ, ಕಾರವಾರ.
5. ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ.
6. ಆಯುಕ್ತರು, ಖಜಾನೆ ಇಲಾಖೆ, ವಿವಿ ಟವರ್, ಬೆಂಗಳೂರು-01.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, ಕೆಪಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
9. ಉಪ ನಿರ್ದೇಶಕರು, ಖಜಾನೆ ನೆಟ್ ವರ್ಕ್ ಮ್ಯಾನೇಜ್ಮೆಂಟ್ ಸೆಂಟರ್, ಕೆಪಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ ಬೆಂಗಳೂರು.
10. ಜಿಲ್ಲಾ ಖಜಾನಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ.
11. ಜಿಲ್ಲಾ ಖಜಾನಾಧಿಕಾರಿಗಳು, ಕೊಡಗು ಜಿಲ್ಲೆ.

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ) ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಇವರ ಆಪ್ತ ಸಹಾಯಕರು ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ಇವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ-7 & 8), ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ ಮತ್ತು ನೋಂ & ಮು) ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಕಂದಾಯ ಇಲಾಖೆ (ವಿ.ನಿ.) ಲೆಕ್ಕ ಪತ್ರ ಶಾಖೆ.
7. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.